## 58. ತರಕಾರಿ ಹಣ್ಣು ಬೆಳೆಗಾರರಿಗೆ ಪ್ಯಾಕೇಜ್

ಸದ್ಯದಲ್ಲಿಯೇ ತರಕಾರಿ ಮತ್ತು ಹಣ್ಣು ಬೆಳೆಗಾರರಿಗೂ ಪ್ಯಾಕೇಜ್ ಪ್ರಕಟವಾಗಲಿದೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ಹೇಳಿದ್ದಾರೆ. ಒಂದು ತಿಂಗಳಿನಿಂದ ರಾಜ್ಯದ ಎಲ್ಲಾ 30 ಜಿಲ್ಲೆಗಳಿಗೆ ಭೇಟಿ ಕೊಟ್ಟು ರೈತರ ಸಮಸ್ಯೆ ಆಲಿಸಿ ರೈತರ ನೆರವಿಗೆ ಬರುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದು, ಮುಖ್ಯಮಂತ್ರಿಗಳು ಕೊರೊನಾ ಲಾಕ್‌ಡೌನ್ ವಿಶೇಷ ಪ್ಯಾಕೆಜ್‌ನಲ್ಲಿ ಹೂ ಬೆಳೆಗಾರರಿಗೆ ಪ್ಯಾಕೇಜ್ ನೀಡಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಕಳಪೆ ಬಿತ್ತನೆ ಬೀಜದ ಮಾಫಿಯಾವನ್ನು ಬಯಲು ಮಾಡಲಾಗಿದ್ದು, ಆಂಧ್ರದ ಮೂಲವನ್ನು ಪತ್ತೆ ಮಾಡಲಾಗಿದೆ. ಅಲ್ಲಿ ತಿರಸ್ಕೃತಗೊಂಡಿದ್ದ ಬೀಜಗಳನ್ನು ರಾಜ್ಯದಲ್ಲಿ ಮಾರಾಟ ಮಾಡಲಾಗುತ್ತಿತ್ತು. ಮುಸುಕಿನ ಜೋಳ, ಸೂರ್ಯಕಾಂತಿ, ಹತ್ತಿ ಸೇರಿದಂತೆ ಅಂದಾಜು ಹತ್ತು ಸಾವಿರಕ್ಕೂ ಹೆಚ್ಚು ಕ್ವಿಂಟಾಲ್ ಕಳಪೆ ಬೀಜ ವಶಕ್ಕೆ ಪಡೆದು ಎಂಟು ಕ್ರಿಮಿನಲ್ ಕೇಸ್ ದಾಖಲಾಗಿದೆ ಎಂದರು.

ರಾಜ್ಯದ ವಿವಿಧ ಭಾಗದ ಕೃಷಿ ವಿಶ್ವವಿದ್ಯಾಲಯದಿಂದ ಮುಖ್ಯಮಂತ್ರಿ ಪರಿಹಾರ ನಿಧಿಗೆ ಒಟ್ಟು ರೂ.1,25,69,215 ದೇಣಿಗೆಯಾಗಿ ನೀಡಲಾಯಿತು. ಕೃಷಿ ಸಚಿವ ಬಿ.ಸಿ.ಪಾಟೀಲ್ ಅವರು ಎಲ್ಲ ವಿಶ್ವವಿದ್ಯಾಲಯಗಳ ದೇಣಿಗೆಯ ಚೆಕ್ ಅನ್ನು ಮುಖ್ಯಮಂತ್ರಿಯವರಿಗೆ ಹಸ್ತಾಂತರಿಸಿದರು. ಕೋವಿಡ್–19 ಪರಿಹಾರಕ್ಕಾಗಿ ಮುಖ್ಯಮಂತ್ರಿ ಪರಿಹಾರ ನಿಧಿಗೆ ಬೆಂಗಳೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರೂ.58,89,355, ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರೂ.33,02,738, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ರೂ.22,90,651 ಮತ್ತು ಶಿವಮೊಗ್ಗ ಕೃಷಿ ಹಾಗೂ ತೋಟಗಾರಿಕೆ ವಿವಿಯಿಂದ ರೂ.10,86,491 ಗಳ ದೇಣಿಗೆಯನ್ನು ನೀಡಿದೆ.

ಆಧಾರ:ಉದಯವಾಣಿ, ದಿನಾಂಕ:08.05.2020